**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 9/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.06**

**ದಿನಾಂಕಃ 26.11.2025** **ಸಿಡಬ್ಲ್ಯೂ.06**

| | |
|---|---|
| ಹೆಸರು | ರಾಜು |
| ತಂದೆ ಹೆಸರು | ಈರಪ್ಪ |
| ವಯಸ್ಸು | 36 ವರ್ಷ |
| ಉದ್ಯೋಗ | ಅಂಗಡಿ ಕೆಲಸ |
| ವಾಸ ಸ್ಥಳ | ಹನಗವಾಡಿ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.2 ರವರ ಪರಿಚಯವಿದೆ. ಆರೋಪಿತರ ಪರಿಚಯವಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಆರೋಪಿ ತೋರಿಸಿದ ಕೃತ್ಯ ನಡೆದ ಸ್ಥಳ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ.5 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ. 5 (ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 1 ವರ್ಷಗಳ ಹಿಂದೆ ಹರಿಹರ ಬೈಪಾಸ್ ರಸ್ತೆಯಲ್ಲಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿಗೆ 2 ಛಾಯ ಚಿತ್ರ ತೋರಿಸಲಾಗಿ ಅದರಲ್ಲಿ ತಾನು ಇರುವುದಾಗಿ ಒಪ್ಪಿರುತ್ತಾರೆ. ಸದರಿ ಛಾಯ ಚಿತ್ರಗಳನ್ನು ಈಗಾಗಲೇ ನಿಪಿ.6 ಮತ್ತು 7 ಎಂದು ಗುರುತಿಸಲಾಗಿದೆ. ಸದರಿ ಛಾಯ ಚಿತ್ರಗಳನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 01.10.2023 ರಂದು ಹರಿಹರ ಗ್ರಾಮಾಂತರ ಠಾಣೆಯ ಪೊಲೀಸರು ನನಗೆ ಮತ್ತು ಚಾಸಾ.5 ರವರಿಗೆ ಆರೋಪಿತರು ಕೃತ್ಯ ನಡೆದ ಸ್ಥಳವನ್ನು ತೋರಿಸುತ್ತಾರೆ ಸದರಿ ಕಾಲಕ್ಕೆ ಪಂಚರಾಗಬೇಕು ಎಂದು ಹೇಳಿದ ಮೇರೆಗೆ ನಾನು ಸಾಕ್ಷಿಯಾಗಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಅದರಂತೆ ಹರಿಹರ ಶಿವಮೊಗ್ಗ ರಾಜ್ಯ ಹೆದ್ದಾರಿಯಲ್ಲಿ ನಿಪಿ.5 ರಂತೆ ಸಂಜೆ 5.30 ರಿಂದ 6.30 ರವರೆಗೆ ಪಂಚನಾಮೆ ಜರುಗಿಸಿ ನಿಪಿ.6 ಮತ್ತು 7 ರಂತೆ ಛಾಯ ಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಮಾಹಿತಿ

ತಿಳಿದಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ .**

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ